# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1393 |
| 2 | ಸದಸ್ಯರ ಹೆಸರು | : | ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 20–03–2025 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಿಗೆಹಳ್ಳಿಯಿಂದ ಭದ್ರಪ್ಪ ಲೇಔಟ್ ಮುಖಾಂತರ ಸಂಜಯನಗರ ಬಳಿ ರೈಲ್ವೆ ಗೇಟ್ ಬಳಿ ನಿತ್ಯ ಟ್ರಾಫಿಕ್ ಜಾಮ್ ಉಂಟಾಗಿ ವಿದ್ಯಾರ್ಥಿಗಳು, ವಾಹನ ಸವಾರರು ನರಕ ಯಾತನೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಲ್ಲಿ ಟ್ರಾಫಿಕ್ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಹೊರ ವರ್ತುಲ ರಸ್ತೆಯ ಭದ್ರಪ್ಪ ಬಡಾವಣೆ ಕಡೆಯಿಂದ ಸಂಜಯ್‌ನಗರ ಕಡೆಗೆ ರೈಲ್ವೆ ಗೇಟ್ ಬಳಿ ಪ್ರತಿ ನಿತ್ಯ ರೈಲುಗಾಡಿ ಓಡಾಡುವ ಸಮಯದಲ್ಲಿ ಟ್ರಾಫಿಕ್ ಜಾಮ್ ಉಂಟುಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಟ್ರಾಫಿಕ್ ಸಮಸ್ಯೆಯನ್ನು ನಿವಾರಿಸಲು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಕ್ರಮವಹಿಸಲಾಗುತ್ತಿದೆ. |
| ಆ) | ನಗರ ಹೊರಭಾಗದಲ್ಲಿ ಟ್ರಾಫಿಕ್ ನಿಯಂತ್ರಿಸುವ ಸಲುವಾಗಿ ರೈಲ್ವೆ ಗೇಟ್ ಬಳಿ ಅಂಡರ್ ಪಾಸ್, ಫ್ಲೈಓವರ್ ನಿರ್ಮಾಣ ಮಾಡುತ್ತಿದ್ದು, ನಗರದ ಮಧ್ಯ ಭಾಗದಲ್ಲಿ ಈ ರೈಲ್ವೆ ಗೇಟ್ ಬಳಿ ಅಂಡರ್ ಪಾಸ್ ಅಥವಾ ಫ್ಲೈಓವರ್ ನಿರ್ಮಿಸುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ; ಇಲ್ಲದಿದ್ದಲ್ಲಿ ಸದರಿ ಟ್ರಾಫಿಕ್ ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬೆಂಗಳೂರು ನಗರದ ಸಾಕಷ್ಟು ರೈಲ್ವೆ ಲೆವೆಲ್ ಕ್ರಾಸಿಂಗ್ ಸ್ಥಳಗಳಲ್ಲಿ ರೈಲ್ವೆ ಕೆಳ ಸೇತುವೆ ಅಥವಾ ರೈಲ್ವೆ ಮೇಲ್ಸೇತುವೆಗಳನ್ನು ನಿರ್ಮಿಸುವ ಯೋಜನೆಗಳನ್ನು ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ವತಿಯಿಂದ ನಿರ್ವಹಿಸಲಾಗುತ್ತಿದೆ. |
| ಇ) | ನಾಗಶೆಟ್ಟಿಹಳ್ಳಿ ಭದ್ರಪ್ಪ ಲೇಔಟ್ ಜಂಕ್ಷನ್‌ನಲ್ಲಿ ರೈಲ್ವೆ ಗೇಟ್ ಬಳಿ ದುರ್ನಾತ ಬೀರುವ ಕಸದರಾಶಿ ಬಿದ್ದು, ದುರ್ನಾತ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ಸ್ವಚ್ಛಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ನಾಗಶೆಟ್ಟಿಹಳ್ಳಿ ಭದ್ರಪ್ಪ ಲೇಔಟ್ ಜಂಕ್ಷನ್‌ನಲ್ಲಿ ರೈಲ್ವೆ ಗೇಟ್ ಬಳಿ ಕಸ ಇರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಕುರಿತು ರೈಲ್ವೇ ಇಲಾಖೆ ಹಾಗೂ ಪಾಲಿಕೆಯು ಜಂಟಿಯಾಗಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ನಅಇ 176 ಎಂಎನ್‌ವೈ 2025**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ